ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಹಾಗೂ ಶ್ರೀಮತಿ ಉಮಾಶ್ರೀ ಇವರ ಗಮನ ಸೆಳೆಯುವ ಸೂಚನೆಗೆ ನಿಯಮ 72ರಡಿ ನೀಡಿರುವ ಉತ್ತರ

ಸೂಚನೆ

ರಾಜ್ಯದಲ್ಲಿ ಸಮಾಜದ ರೈತರು ಹಾಗೂ ಆರ್ಥಿಕ ದುರ್ಬಲ ವರ್ಗದ ಜನತೆಯಿಂದ ಬಲತ್ಕಾರವಾಗಿ ಸಾಲ ವಸೂಲಾತಿಯಿಂದ ಕಿರುಕುಳ, ಹಿಂಸೆ ಮತ್ತು ಒತ್ತಡದ ಹಲವಾರು ಘಟನೆಗಳು ಬೆಳಕಿಗೆ ಬಂದಿದೆ. ರಾಜ್ಯದಲ್ಲಿ ಕಿರುಸಾಲ ಮತ್ತು ಸಣ್ಣ ಸಾಲ ವಸೂಲಾತಿ ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮ ಮತ್ತು ರೈತ ಹಾಗೂ ಆರ್ಥಿಕ ದುರ್ಬಲ ವರ್ಗದ ಜನತೆಗೆ ನ್ಯಾಯ ಒದಗಿಸಲು ತೆಗೆದುಕೊಂಡ ಕ್ರಮಗಳು ಮತ್ತು ಇದರಿಂದ ದೌರ್ಜನ್ಯಕ್ಕೆ ಒಳಗಾದವರಿಗೆ ಸರ್ಕಾರದ ಸಹಾಯ ಹಸ್ತ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯ ಬಯಸುತ್ತೇನೆ.

ಉತ್ತರ

ಕಿರು ಸಾಲ, ಸಣ್ಣ ಸಾಲ, ಖಾಸಗಿ ಹಣಕಾಸು ಮತ್ತು ಇತರ ಅನಿಯಂತ್ರಿತ ಲೇವಾದೇವಿದಾರರು, ಬಡ ಗ್ರಾಮೀಣ ನಿರ್ಗತಿಕರು, ನಗರ ಕಾರ್ಮಿಕರು, ಸಮಾಜದ ಅಶಕ್ತ ಮತ್ತು ದುರ್ಬಲ ವರ್ಗದವರನ್ನು ಸಾಲ ವಸೂಲಾತಿಗಾಗಿ ಪೀಡಿಸುತ್ತಿವೆ ಮತ್ತು ಉಸಿರುಗಟ್ಟಿಸುತ್ತಿವೆ. ಸಾಲಗಾರನಿಗೆ ಬಡ್ಡಿಯ ಕುರಿತಂತೆ ಕೆಲವೊಮ್ಮೆ ದುಪ್ಪಟ್ಟು ಮೊತ್ತವನ್ನು ಅಥವಾ ಹೆಚ್ಚಿನ ಬಡ್ಡಿಯನ್ನು ಪಾವತಿಸಲು ಒತ್ತಾಯಿಸಲಾಗುತ್ತಿದೆ. ಲೇವಾದೇವಿದಾರರ ಬಲವಂತದ ವಸೂಲಿ ಕ್ರಮಗಳಿಂದಾಗಿ ಮತ್ತು ಹೆಚ್ಚಿನ ಸಾಲದ ಹೊರೆಯಿಂದಾಗಿ ಸಾಲಗಾರರು ಸಂಕಷ್ಟದಲ್ಲಿ ಬೀಳುತ್ತಾರೆ ಮತ್ತು ಅಂತಹವರಲ್ಲಿ ನೊಂದ ಕೆಲವರು ಆತ್ಮಹತ್ಯೆಯಂತಹ ವಿಪರೀತ ಕೃತ್ಯಗಳಿಗೆ ಶರಣಾಗುತ್ತಿದ್ದಾರೆ.

ಕರ್ನಾಟಕ ಕಿರು (Micro) ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಆಧ್ಯಾದೇಶ 2025 ಸಾಲಗಳನ್ನು ಪಡೆಯುವ ಮತ್ತು ನಂತರ ಸಾಲಗಳಲ್ಲಿಯೇ ಮುಳುಗಿಹೋಗಿರುವ ಅಸಹಾಯಕರನ್ನು ರಕ್ಷಿಸುವ ಕುರಿತಾಗಿದೆ.

ಸದರಿ ಅಧ್ಯಾದೇಶದ ಮುಖ್ಯಾಂಶಗಳು ಈ ಕೆಳಗಿನಂತಿವೆ:-

1. ಸದರಿ ಆಧ್ಯಾದೇಶವು ದಿನಾಂಕ: 12.02.2025 ರಂದು ಜಾರಿಗೆ ಬಂದಿದೆ.
2. ಸದರಿ ಆಧ್ಯಾದೇಶವು ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಮತ್ತು ಇತರೆ ಸಾಲ ನೀಡಿಕೆ ಏಜೆನ್ಸಿಗಳು ಅಥವಾ ಲೇವಾದೇವಿಗಾರರು ನೀಡುವ ಹೆಚ್ಚಿನ ಬಡ್ಡಿ ದರಗಳಿಂದ ಸಾಲಗಾರರಿಗೆ ಆಗುವ ಹೊರೆ ಮತ್ತು ಬಲವಂತದ ವಸೂಲಾತಿ ಕ್ರಮಗಳಿಂದ ಆಗುವ ಕಿರುಕುಳಗಳನ್ನು ನಿಯಂತ್ರಿಸಲು ಉದ್ದೇಶಿಸಿದೆ.
3. ಇದರಿಂದ ವಿಶೇಷವಾಗಿ ದುರ್ಬಲರು, ಮಹಿಳೆಯರು ಮತ್ತು ರೈತರು, ಮಹಿಳಾ ಸ್ವಸಹಾಯ ಸಂಘಗಳಿಗೆ ಸಾಲ ಮರುಪಾವತಿ ವಿಷಯದಲ್ಲಿ ಕಿರುಕುಳಗಳನ್ನು ತಪ್ಪಿಸಲು ಸಹಾಯಕವಾಗಿರುತ್ತದೆ.
4. ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಸಾಲಗಾರರಿಂದ ಯಾವುದೇ ಭದ್ರತೆ ಪಡೆಯುವಂತಿಲ್ಲ ಎಂದು ಆದೇಶಿಸಲಾಗಿದೆ.
5. ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಗ್ರಾಹಕರಿಗೆ ವಿಧಿಸುವ ಬಡ್ಡಿದರದ ಬಗ್ಗೆ ಪಾರದರ್ಶಕವಾಗಿ ಸಾಲಗಾರರಿಗೆ ಲಿಖಿತ ರೂಪದಲ್ಲಿ ತಿಳಿಸುವಂತೆ ಆದೇಶಿಸಲಾಗಿದೆ.

6. ಭಾರತೀಯ ರಿಸರ್ವ್ ಬ್ಯಾಂಕ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ನೋಂದಾಯಿತವಲ್ಲದ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಗೆ ಮಾತ್ರ ಈ ಆಧ್ಯಾದೇಶ ಅನ್ವಯವಾಗುತ್ತದೆ. ಭಾರತೀಯ ರಿಸರ್ವ್ ಬ್ಯಾಂಕ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ನೋಂದಾಯಿತ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಅಂದಾಜು ರೂ. 60,000 ಕೋಟಿ ಸಾಲವನ್ನು ಸುಮಾರು 1.09 ಕೋಟಿ ಸಾಲಗಾರರು ಪಡೆದಿದ್ದು, ನೋಂದಣಿಯಾಗದ ಸಂಸ್ಥೆಗಳಿಂದ ಸಾಲ ಪಡೆದವರ ಮಾಹಿತಿ ವಿವರವಾಗಿ ಇಲ್ಲವಾದರೂ ಅಂದಾಜು ರೂ. 40,000 ಕೋಟಿ ಸಾಲ ಪಡೆದಿರುವರು ಎಂದು ಅಂದಾಜಿಸಲಾಗಿದೆ.

7. ಆಯಾ ಜಿಲ್ಲೆಗಳಲ್ಲಿ ವ್ಯವಹರಿಸುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಜಿಲ್ಲಾಧಿಕಾರಿಗಳಲ್ಲಿ ನೋಂದಣಿ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಸದರಿ ಸಂಸ್ಥೆಗಳು ತಾವು ವಿಧಿಸುವ ಬಡ್ಡಿದರ, ಸಾಲಗಾರರ ಮಾಹಿತಿ, ಸುಸ್ತಿ ಸಾಲಗಳ ವಿವರ ಮುಂತಾದವುಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಬೇಕಾಗಿರುತ್ತದೆ.

8. ಆಯಾ ಜಿಲ್ಲೆಗಳಲ್ಲಿ ವ್ಯವಹರಿಸುತ್ತಿರುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಜಿಲ್ಲಾಧಿಕಾರಿಗಳಿಗೆ ತ್ರೈಮಾಸಿಕ ಮತ್ತು ವಾರ್ಷಿಕ ವ್ಯವಹಾರದ ವಿವರಗಳನ್ನು ಸಲ್ಲಿಸಬೇಕು. ಸದರಿ ಮಾಹಿತಿಯನ್ನು ಸಲ್ಲಿಸದಿದ್ದಲ್ಲಿ, 6 ತಿಂಗಳ ಕಾರಾ ವಾಸದೊಂದಿಗೆ ಅಥವಾ ರೂ.10,000/- ಗಳಿಗೆ ವಿಸ್ತರಿಸಬಹುದಾದ ಜುಲ್ಮಾನೆ ಅಥವಾ ಅವೆರಡರಿಂದಲೂ ದಂಡಿತರಾಗುತ್ತಾರೆ.

9. ವಿವಾದಗಳನ್ನು ಇತ್ಯರ್ಥ್ಯ ಪಡಿಸುವುದಕ್ಕಾಗಿ ಒಂಬುಡ್ಸ್ ಪರ್ಸನ್‌ಗಳನ್ನು ಸರ್ಕಾರವು ಅಧಿಸೂಚನೆಯ ಮೂಲಕ ನೇಮಕ ಮಾಡಬಹುದು.

10. ಬಲವಂತದ ವಸೂಲಿ ಕ್ರಮಗಳನ್ನು ವಿವರವಾಗಿ ತಿಳಿಸಲಾಗಿದೆ.

11. ಬಲವಂತದ ವಸೂಲಿ ಕ್ರಮಗಳನ್ನು ಕೈಗೊಂಡಲ್ಲಿ, ಅಂತಹ ವ್ಯಕ್ತಿಯು ವಿಚಾರಣೆಗೆ ಒಳಪಡುತ್ತಾನೆ ಮತ್ತು 10 ವರ್ಷಗಳವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದ ಶಿಕ್ಷೆ ಹಾಗೂ ರೂ. 5 ಲಕ್ಷ ಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯೊಂದಿಗೆ ದಂಡಿತನಾಗುತ್ತಾನೆ. ಈ ಅಪರಾಧಗಳು ಸಂಜ್ಞೇಯ ಅಪರಾಧ/ ಜಾಮೀನು ರಹಿತ (Cognizable / Non Bailable) ಆಗಿರುತ್ತವೆ. ಯಾವುದೇ ಪೋಲೀಸ್ ಅಧಿಕಾರಿ ಇಂತಹ ಪ್ರಕರಣಗಳನ್ನು ನೋಂದಣಿ ಮಾಡಿಕೊಳ್ಳುವುದು ನಿರಾಕರಿಸುವಂತಿಲ್ಲ.

12. ಪೋಲೀಸ್ ಉಪ ಅಧೀಕ್ಷಕರ (Dy SP) ದರ್ಜೆಗೆ ಕಡಿಮೆಯಿಲ್ಲದ ಅಧಿಕಾರಿಯು ಸ್ವಯಂ ಪ್ರೇರಿತವಾಗಿ (Suo moto) ಪ್ರಕರಣವನ್ನು ದಾಖಲಿಸಬಹುದು.

13. ಸರ್ಕಾರವು ಕಾಲಕಾಲಕ್ಕೆ ಈ ಆಧ್ಯಾದೇಶದ ಅನುಷ್ಠಾನಕ್ಕಾಗಿ ನಿರ್ದೇಶನಗಳನ್ನು ನೀಡುವ ಅಧಿಕಾರ ಹೊಂದಿರುತ್ತದೆ.

14. ಈ ಆಧ್ಯಾದೇಶದಿಂದ ಭಾರತೀಯ ರಿಸರ್ವ್ ಬ್ಯಾಂಕ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ನೋಂದಾಯಿತವಲ್ಲದ ಮೈಕ್ರೋ ಫೈನಾನ್ಸ್ ಸಂಸ್ಥೆಗಳಲ್ಲಿ ಆರ್ಥಿಕ ಶಿಸ್ತು ಹೆಚ್ಚುತ್ತದೆ ಮತ್ತು ಸಾಲಗಾರರಿಗೆ ಕಿರುಕುಳ, ಬಲವಂತದ ವಸೂಲಿ ಕ್ರಮಗಳಿಂದ ಮುಕ್ತಿ ದೊರೆಯುತ್ತದೆ.

ಸಂಖ್ಯೆ: ಎಫ್‌ಡಿ-ಸಿಎಂ/30/2025

(ಸಿದ್ಧರಾಮಯ್ಯ)
ಮಾನ್ಯ ಮುಖ್ಯಮಂತ್ರಿ